# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಿ. ಕೆ. ಹರಿಪ್ರಸಾದ್ ಇವರು ನಿಯಮ 330 ರಡಿ ಮಂಡಿಸಿರುವ ಸೂಚನೆಗೆ ಮಾಹಿತಿ

## ಸೂಚನೆ

**ಉಡುಪಿ ಜಿಲ್ಲೆ ಮಲ್ಪೆಯ ಮಹಾಲಕ್ಷ್ಮೀ ಕೋ-ಆಪರೇಟಿವ್ ಬ್ಯಾಂಕಿನಲ್ಲಿ ಗ್ರಾಹಕರು ಸಾಲ ಪಡೆದಿದ್ದಾರೆನ್ನುವಂತೆ ನಕಲಿ ದಾಖಲೆಗಳನ್ನು ಸೃಷ್ಟಿಸಿ ಅಂದಾಜು 20 ಕೋಟಿಗೂ ಹೆಚ್ಚು ಅವ್ಯವಹಾರ ನಡೆಸಿರುವ ಪ್ರಕರಣದ ಬಗ್ಗೆ ನಿಯಮ 330ರ ಅಡಿ ಮಾನ್ಯ ಸಹಕಾರ ಸಚಿವರಲ್ಲಿ ಪ್ರಸ್ತಾಪಿಸಬಯಸುತ್ತೇನೆ.**

## ಉತ್ತರ

ಮಹಾಲಕ್ಷ್ಮೀ ಕೋ-ಆಪರೇಟಿವ್ ಬ್ಯಾಂಕ್, ಉಡುಪಿ ಈ ಬ್ಯಾಂಕ್ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮದಡಿ ನೋಂದಣಿಗೊಂಡು, ಆರ್ ಬಿ ಐ ನಿಂದ ಬ್ಯಾಂಕಿಂಗ್ ಪರವಾನಿಗೆ ಪಡೆದು ಕಾರ್ಯನಿರ್ವಹಿಸುತ್ತಿದೆ.

ಮಹಾಲಕ್ಷ್ಮೀ ಕೋ-ಆಪರೇಟಿವ್ ಬ್ಯಾಂಕ್, ಉಡುಪಿ ಈ ಬ್ಯಾಂಕಿನ ಮಲ್ಪೆ ಶಾಖೆಯ ಗ್ರಾಹಕರಾದ ಶ್ರೀ ಪ್ರಸಾದ್ ಕುಲಾಲ್ ಮತ್ತು ಇತರರು ದಿನಾಂಕ:14-10-2024 ರಂದು ಬ್ಯಾಂಕಿನ ಗ್ರಾಹಕರಿಂದ ಆಧಾರ್ ಕಾರ್ಡ್ ಮತ್ತು ಪಾನ್ ಕಾರ್ಡ್ ಪಡೆದು ಕ್ರಿಮಿನಲ್ ಸಂಚು ರೂಪಿಸಿ ನಕಲಿ ಸಹಿ ಮಾಡಿ, ನಕಲಿ ದಾಖಲೆಗಳನ್ನು ಸೃಷ್ಟಿಸಿ, ಸದರಿಯವರ ಹೆಸರಿನಿಂದ ಸಾಲ ಪಡೆದು ಅದನ್ನು ಸ್ವಂತಕ್ಕೆ ಬಳಸಿಕೊಂಡು ನಷ್ಟ ಉಂಟು ಮಾಡಿ ನಂಬಿಕೆ ದ್ರೋಹ ಮಾಡಿರುತ್ತಾರೆ ಎಂದು ದೂರು ಸಲ್ಲಿಸಿರುತ್ತಾರೆ.

ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ಶ್ರೀ ಪ್ರಸಾದ್ ರಾಜ್ ಕಾಂಚನ್ ಇವರು ದಿನಾಂಕ:14.10.2024ರ ಪತ್ರದಲ್ಲಿ ಮತ್ತು ಮಾನ್ಯ ಶ್ರೀ ಜಯಪ್ರಕಾಶ್ ಹೆಗಡೆ, ಮಾಜಿ ಸಚಿವರು ಹಾಗೂ ಮಾಜಿ ಸಂಸದರು ದಿನಾಂಕ:18.10.2024ರ ಪತ್ರದಲ್ಲಿ ಮಹಾಲಕ್ಷ್ಮೀ ಕೋ-ಆಪರೇಟಿವ್ ಬ್ಯಾಂಕ್, ಉಡುಪಿ ಇದರಲ್ಲಿ ದಿನಾಂಕ:01.07.2014 ರಿಂದ 08.03.2023 ರವರೆಗೆ ಬ್ಯಾಂಕಿನ ಅಧ್ಯಕ್ಷರು, ವ್ಯವಸ್ಥಾಪಕ ನಿರ್ದೇಶಕರು ಹಾಗೂ ಸಿಬ್ಬಂದಿ ವರ್ಗದವರು 1413 ಸದಸ್ಯರಿಗೆ ತಲಾ ರೂ.2.00 ಲಕ್ಷದಂತೆ ರೂ.28.26 ಕೋಟಿ ಸಾಲವನ್ನು ನಕಲಿ ದಾಖಲೆ ಸೃಷ್ಟಿಸಿ ಬೇನಾಮಿ ಹೆಸರಿನಲ್ಲಿ ಸ್ವಂತಕ್ಕೆ ಬಳಸಿರುವ ಬಗ್ಗೆ ಸಮಗ್ರ ತನಿಖೆಗೆ ಒಳಪಡಿಸುವಂತೆ ಕೋರಿರುತ್ತಾರೆ

ಈ ಕುರಿತು ದಿನಾಂಕ:01-07-2014 ರಿಂದ 08-03-2023 ರವರೆಗೆ ಅಧ್ಯಕ್ಷರು, ವ್ಯವಸ್ಥಾಪಕ ನಿರ್ದೇಶಕರು ಮತ್ತು ಸಿಬ್ಬಂದಿ ವರ್ಗದವರಿಂದ 1413 ಸದಸ್ಯರಿಗೆ ತಲಾ ರೂ. 2 ಲಕ್ಷ ದಂತೆ ರೂ. 28.26 ಕೋಟಿ ಸಾಲವನ್ನು ನಕಲಿ ದಾಖಲೆ ಸೃಷ್ಟಿಸಿ ಬೇನಾಮಿ ಹೆಸರಿನಲ್ಲಿ ಸ್ವಂತಕ್ಕೆ ಬಳಸಿರುವ ಬಗ್ಗೆ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 64 ರಡಿ ಶಾಸನಬದ್ಧ ವಿಚಾರಣೆಗೆ ಸಹಕಾರ ಸಂಘಗಳ ನಿಬಂಧಕರು ದಿನಾಂಕ:13-11-2024 ರಲ್ಲಿ ವಿಚಾರಣಾಧಿಕಾರಿಯಾಗಿ ಸಹಕಾರ ಸಂಘಗಳ ಉಪ ನಿಬಂಧಕರು, ಉಡುಪಿ ಜಿಲ್ಲೆ, ಉಡುಪಿ ಇವರನ್ನು ನೇಮಿಸಿ ಆದೇಶಿಸಲಾಗಿರುತ್ತದೆ.

ವಿಚಾರಣಾಧಿಕಾರಿಗಳು 2 ತಿಂಗಳೊಳಗಾಗಿ ವಿಚಾರಣೆ ನಡೆಸಿ ವಿಚಾರಣಾ ವರದಿಯನ್ನು ಸಲ್ಲಿಸಲು ಸೂಚಿಸಿದ್ದು, ವಿಚಾರಣೆ ಪ್ರಗತಿಯಲ್ಲಿರುತ್ತದೆ.

**ಸಂಖ್ಯೆ: ಸಿಒ 159 ಸಿಸಿಬಿ 2024**

**(ಕೆ.ಎನ್.ರಾಜಣ್ಣ)**
ಸಹಕಾರ ಸಚಿವರು